ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಪರಿಶಿಷ್ಟ ವರ್ಗಗಳ ಮಾದರಿ ಗ್ರಾಮ/ನವಗ್ರಾಮ ಯೋಜನೆ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-

579(647) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2018-19ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ (84) ರನ್ವಯ ಪರಿಶಿಷ್ಟ ಪಂಗಡಗಳ ಮಾದರಿ ಗ್ರಾಮ/ನವಗ್ರಾಮಗಳ ನಿರ್ಮಾಣ ಮಾಡಲು ಆಯ್ಕೆ ಮಾಡಲಾದ ಜಿಲ್ಲೆಗಳಾವುವು; (ಜಿಲ್ಲಾವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು; ಬಿಡುಗಡೆ ಮಾಡಲಾದ ಅನುದಾನವೆಷ್ಟು; ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಿಗೆ ಎಷ್ಟು ಮತ್ತು ಯಾವ ಪ್ರಮಾಣದಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) ಹಾಗೂ ಅನುದಾನ ಬಿಡುಗಡೆಯಾಗದ ಜಿಲ್ಲೆಗಳಿಗೆ ಯಾವ ಕಾಲಮಿತಿಯಲ್ಲಿ ಹಣ ಬಿಡುಗಡೆ ಮಾಡಲಾಗುವುದು ;

(ಇ) ಈ ಯೋಜನೆ ಬಿಡುಗಡೆ ಮಾಡುವ ಅನುದಾನವು ನಿರ್ದೇಶಕರು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪಿ.ಡಿ ಖಾತೆಯಲ್ಲಿದ್ದು, ಸದರಿ ಖಾತೆಯಿಂದ ಅನುದಾನವನ್ನು ಬಿಡುಗಡೆ ಮಾಡಲು ಅನುಮತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಹಲವಾರು ತಿಂಗಳು ಕಳೆದಿದ್ದರೂ ಇದುವರೆವಿಗೂ ಅನುಮತಿ ನೀಡದಿರಲು ಕಾರಣಗಳೇನು; ಮತ್ತು ಯಾವಾಗ ಅನುಮತಿ ನೀಡಿ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು? (ಸಂಪೂರ್ಣ ವಿವರ ನೀಡುವುದು)